ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೀದರ್ ಜಿಲ್ಲೆ, ಬಸವಕಲ್ಯಾಣ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-I) ಅನ್ನು ಸರ್ಕಾರದ ಅಂತಿಮ ಅನುಮೋದನೆಗಾಗಿ ಸಲ್ಲಿಸುವ ಬಗ್ಗೆ.

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ. ನಅಇ 124 ಬೆಮಪ್ರಾ 2006, ದಿನಾಂಕ: 21.6.06.

೨) ಸದಸ್ಯ ಕಾರ್ಯದರ್ಶಿ, ನಗರ ಯೋಜನಾ ಪ್ರಾಧಿಕಾರ, ಬಸವಕಲ್ಯಾಣ ಇವರ ಪತ್ರ ಸಂಖ್ಯೆ. ಯೋಪ್ರಾ/ಬ.ಕ/ಮಾ.ಪ್ಲಾ.ಪ-1:2006-07:236, ದಿನಾಂಕ: 14.2.07.

೩) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ. ನಯೋ:ಉನಿ(ಯೋವಿ)ಬಸವಕಲ್ಯಾಣ:61:ಮಾಪ್ಲಾಪ:06-07.

<u>ಪ್ರಸ್ತಾವನೆ:</u>

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಬೀದರ್ ಜಿಲ್ಲೆ ಬಸವಕಲ್ಯಾಣ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-1) ಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಮೇಲೆ (2) ಮತ್ತು (3) ರ ಪತ್ರದಲ್ಲಿ ನಗರ ಯೋಜನಾ ಪ್ರಾಧಿಕಾರವು ಬಸವಕಲ್ಯಾಣ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯನ್ನು (ಪರಿಷ್ಕೃತ-1) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ಮತ್ತು 13(ಡಿ) ರನ್ವಯ ಪರಿಷ್ಕರಿಸಿ, ಮಹಾ ಯೋಜನೆ (ಪರಿಷ್ಕೃತ-I) ಯನ್ನು ರೂಪಿಸಿ ಅಂತಿಮ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿದೆ.

ಮೇಲೆ ಓದಲಾದ (3) ರ ಏಕ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು, ಬಸವಕಲ್ಯಾಣ ಪಟ್ಟಣದ ಜನಸಂಖ್ಯೆಯು 2001 ರಲ್ಲಿ 58,785 ಇದ್ದು, 20 ವರ್ಷಗಳ ಯೋಜನಾ ಅವಧಿಗೆ ಅಂದರೆ, 2021 ನೇ ಇಸವಿಗೆ 1,40,000 ಆಗಬಹುದೆಂದು ಅಂದಾಜಿಸಿ ಮಾಸ್ಟರ್ ಪ್ಲಾನ್ ಅನ್ನು ತಯಾರಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 2328 ಹೆಕ್ಟೇರ್ ವಿಸ್ತೀರ್ಣದಲ್ಲಿ 1545.00 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಬಸವಕಲ್ಯಾಣ ಪಟ್ಟಣದ ಜನಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ರಸ್ತೆಗಳ ಹಾಲಿ ಪಂಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ, ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಾಸ್ಟರ್ ಪ್ಲಾನ್ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು

ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 9 ಮತ್ತು 12 ರವರೆಗೆ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ನಗರದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 1545.00 ಹೆಕ್ಟೇರ್ ವಿಸ್ತೀರ್ಣದ ಪ್ರದೇಶದಲ್ಲಿ ವಸತಿಗಾಗಿ ಶೇ.45.39, ವಾಣಿಜ್ಯಕ್ಕೆ ಶೇ.5.09, ಕೈಗಾರಿಕೆಗೆ ಶೇ.4.68, ಸಾರ್ವಜನಿಕ ಅರೆ ಸಾರ್ವಜನಿಕಕ್ಕೆ ಶೇ.10.57, ಉದ್ಯಾನವನ ಮತ್ತು ಬಯಲು ಜಾಗೆಗೆ ಶೇ.14.39, ನಾಗರೀಕ ಸೌಲಭ್ಯಕ್ಕೆ ಶೇ.0.23 ಹಾಗೂ ಸಾರಿಗೆ ಮತ್ತು ಸಂಪರ್ಕಕ್ಕಾಗಿ ಶೇ.19.65 ವಿಸ್ತೀರ್ಣವನ್ನು ನಿಗಧಿಪಡಿಸಲಾಗಿದೆ. ಹಾಗೂ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(2) ರನ್ವಯ ಸದರಿ ಯೋಜನೆಯನ್ನು ಸರ್ಕಾರದ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ. ನಅಇ 22 ಗುಅಪ್ರಾ 2007, ಬೆಂಗಳೂರು, ದಿನಾಂಕ: 10-4-2007</u>

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಸವಕಲ್ಯಾಣ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ–I) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ಮತ್ತು 13(ಡಿ) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆ (ಪರಿಷ್ಕೃತ–I) ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
10/4/07
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೨) ಸದಸ್ಯ ಕಾರ್ಯದರ್ಶಿ, ನಗರ ಯೋಜನಾ ಪ್ರಾಧಿಕಾರ, ಬಸವಕಲ್ಯಾಣ.
೩) ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೀದರ್.
೪) ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
೫) ಕರ್ನಾಟಕ ರಾಜ್ಯಪತ್ರ.
೬) ಸರ್ಕಾರದ ಕಾರ್ಯದರ್ಶಿಗಳ/ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ
೭) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.